ಮೊಳಕಾಲ್ಮೂರಿನಲ್ಲಿ ವೃತ್ತ ಪೊಲೀಸ್ ಠಾಣೆ

1932. ಶ್ರೀ ಎನ್.ಜಿ. ನಾಯಕ್ (ಮೊಳಕಾಲ್ಮೂರು) : ಮಾನ್ಯ ಗೃಹ ಮತ್ತು ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರುವಿನಲ್ಲಿ ವೃತ್ತ ಪೊಲೀಸ್ ಠಾಣೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಯಾವಾಗ ಠಾಣೆಯನ್ನು ಮಂಜೂರು ಮಾಡಲಾಗುವುದು.

ಶ್ರೀ ಧರ್ಮಸಿಂಗ್ (ಗೃಹ ಮತ್ತು ಅಬಕಾರಿ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ. ಆದಾಗ್ಯೂ. ಆ ರೀತಿ ಪ್ರಸ್ತಾವನೆ ಬಂದಲ್ಲಿ ಅದನ್ನು ಆದ್ಯತೆ. ಅಗತ್ಯತೆ ಮತ್ತು ಲಭ್ಯ ಸಂಪನ್ಮೂಲಗಳ ಆಧಾರದ ಮೇಲೆ ಪರಿಗಣಿಸಲಾಗುವುದು.

ಕರ್ನಾಟಕ ಗೃಹ ಮಂಡಳಿಯ ವಿವಿಧ ಯೋಜನೆಗಳು

1522. ಶ್ರೀ ಬಸವರಾಜ ರಾಯರೆಡ್ಡಿ (ಯಲ್ಬುರ್ಗಿ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಗೃಹ ಮಂಡಳಿಯು ರಾಜ್ಯದಲ್ಲಿ ವಿವಿಧ ಯೋಜನೆಗಳಡಿಯಲ್ಲಿ 1990-91 ಹಾಗೂ 1991-92ರ ಸಾಲಿಗೆ ಮನೆ ಮತ್ತು ಬಹುಮಹಡಿ ಮನೆ ನಿರ್ಮಾಣ ಮಾಡಲು ಗುರುತಿಸಲಾಗಿರುವ ಸ್ಥಳಗಳಾವುವು (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ನೀಡುವುದು)?

ಆ) ಈ ಉದ್ದೇಶಕ್ಕಾಗಿ ಮಾಸಲಾಗಿರಿಸಿರುವ ಹಣ (ವಿವರ ನೀಡುವುದು) ?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು) :

ಅ) ಪಟ್ಟಿ ಲಗತ್ತಿಸಲಾಗಿದೆ (ಅನುಬಂಧ-ಎ)

ಆ) 1990-91ರ ಸಾಲಿಗೆ 24.61 ಕೋಟಿ ರೂಪಾಯಿಗಳು

1991-92ರ ಸಾಲಿಗೆ 44.54 ಕೋಟಿ ರೂಪಾಯಿಗಳನ್ನು ಕರ್ನಾಟಕ ಗೃಹ ಮಂಡಳಿಯು ಮಾಸಲಾಗಿರಿಸಿದೆ.

ವಿವರ ಲಗತ್ತಿಸಿದೆ (ಅನುಬಂಧ-ಎ)